# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿಕ್ಕಮಗಳೂರು ನಗರದಲ್ಲಿರುವ ಬಸವನಹಳ್ಳಿ ಕೆರೆಯ ಹೂಳು ತೆಗೆಯುವ ಹಾಗೂ ಏರಿ ಅಭಿವೃದ್ಧಿ ಪಡಿಸುವ ಕಾಮಗಾರಿಯ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

*****

**ಓದಲಾಗಿದೆ :-**

1. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿನಿ/ತಾಂತ್ರಿಕ-4/YPD-251 ಭಾಗ-3/2020-21, ದಿನಾಂಕ:01-12-2020.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿನಿ/ತಾಂತ್ರಿಕ-4/YPD-251 ಭಾಗ-3/2020-21/3093, ದಿನಾಂಕ:16-03-2021.
3. ಕಾರ್ಯಪಾಲಕ ಇಂಜಿನಿಯರ್, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ವಿಭಾಗ, ಹಾಸನ ಇವರ ಪತ್ರ ದಿನಾಂಕ:05-02-2021.

**ಪ್ರಸ್ತಾವನೆ :-**

ಮೇಲೆ ಓದಲಾದ (1) ಮತ್ತು (2) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ವಿಷಯದ ಬಗ್ಗೆ ಪ್ರಸ್ತಾವನೆ ಸಲ್ಲಿಸುತ್ತಾ, ಬಸವನಹಳ್ಳಿ ಕೆರೆಯು ಚಿಕ್ಕಮಗಳೂರು ನಗರದ ಹೃದಯ ಭಾಗದಲ್ಲಿದ್ದು, ಈ ಕೆರೆಯು ಸರಣಿ ಕೆರೆಯಾಗಿರುತ್ತದೆ; ಈ ಕೆರೆಯ ಸಾಮರ್ಥ್ಯವು (Gross capacity) ಸಣ್ಣ ನೀರಾವರಿ ಕೆರೆಗಳ ರಿಜಿಸ್ಟರ್ ಪ್ರಕಾರ 49.92 ಎಂ.ಸಿ.ಎಫ್.ಟಿ. ಯಾಗಿರುವುದಾಗಿ ಹಾಗೂ ಕೆರೆಯ ಜಲಾವೃತ ಪ್ರದೇಶವು (Water spread area) 113.84 ಎಕರೆಗಳಿರುತ್ತದೆ; ಆದರೆ ವಿವರವಾದ ಸರ್ವೆ (Total station survey) ನಂತರ ಕೆರೆಯ ಸಾಮರ್ಥ್ಯವು (Gross Capacity) 22.79 ಎಮ್.ಸಿ.ಎಫ್.ಟಿ. ಯಾಗಿರುವುದಾಗಿ ಹಾಗೂ ಕೆರೆಯ ಜಲಾನಯನ ಪ್ರದೇಶವು (water spread area) 93.30 ಎಕರೆಗಳು ಆಗಿರುತ್ತದೆ; ಈ ಕೆರೆಯಿಂದ 766.00 ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಲಾಗುತ್ತದೆ ಎಂದು ತಿಳಿಸಿರುತ್ತಾರೆ.

ಬಸವನಹಳ್ಳಿ ಕೆರೆಯ ಜಲಾವೃತ ಪ್ರದೇಶದ ತುಂಬಾ ಜಂಗಲ್ ಹಾಗೂ ಹೂಳು ತುಂಬಿಕೊಂಡು ಕೆರೆಯ ಸಂಗ್ರಹಣಾ ಸಾಮರ್ಥ್ಯವು ಕಡಿಮೆಯಾಗಿರುತ್ತದೆ; ಈಗಿನ ಕೆರೆಯ ನೀರಿನ ಸಂಗ್ರಹಣಾ ಸಾಮರ್ಥ್ಯ 22.79 ಎಮ್.ಸಿ.ಎಫ್.ಟಿ. ಯಾಗಿರುವುದಾಗಿ ತಿಳಿಸುತ್ತಾ, ಕೆರೆಯ ಅಂಗಳದಲ್ಲಿ ಹೂಳನ್ನು ತೆಗೆಯುವುದು, ಏರಿ ಅಭಿವೃದ್ಧಿ, ಪೋಷಕ ನಾಲೆ ಮತ್ತು ಕೋಡಿ ನಾಲೆ, ಕೆರೆಯ ಅಂಗಳವನ್ನು ಸುತ್ತುವರೆದಿರುವ ರಸ್ತೆ ಇತ್ಯಾದಿಗಳನ್ನು ಅಭಿವೃದ್ಧಿ ಪಡಿಸುವ ಕಾಮಗಾರಿಯನ್ನು ಸಣ್ಣ ನೀರಾವರಿ ಇಲಾಖೆಯು ನೀಡಿರುವ ಸಹಮತಿಯೊಂದಿಗೆ ಕೈಗೊಳ್ಳಲು ಉದ್ದೇಶಿಸಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಚಿಕ್ಕಮಗಳೂರು ನಗರದಲ್ಲಿರುವ ಬಸವನಹಳ್ಳಿ ಕೆರೆಯ ಹೂಳು ತೆಗೆಯಲು ಹಾಗೂ ಸದರಿ ಕೆರೆಯ ಏರಿ ಅಭಿವೃದ್ಧಿ ಪಡಿಸುವ ಕಾಮಗಾರಿಯ ರೂ.7.00 ಕೋಟಿ ಮೊತ್ತದ ಅಂದಾಜು ಪ್ರಸ್ತಾವನೆಗೆ ದಿನಾಂಕ:05-10-2020 ರಂದು ಜರುಗಿದ ಕಾವೇರಿ ನೀರಾವರಿ ನಿಗಮದ 72ನೇ ಮಂಡಳಿ ಸಭೆಯು ಅನುಮೋದನೆ ನೀಡಲಾಗಿದೆ;

2021-22ನೇ ಸಾಲಿಗೆ ನಿಗಮಕ್ಕೆ ಹಂಚಿಕೆಯಾಗುವ ಅನುದಾನದ ಮಿತಿಯಲ್ಲಿ ಸದರಿ ಕಾಮಗಾರಿಗೆ ಸೂಕ್ತ ಅನುದಾನವನ್ನು ಒದಗಿಸಿಕೊಳ್ಳಲಾಗುವುದು ಎಂದು ವರದಿ ಮಾಡುತ್ತಾ, ಸದರಿ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪುಟ-2ಕ್ಕೆ

ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ:ಜಸಂಇ 73 ಎನ್‌ಹೆಚ್‌ಪಿ 2020,**
**ಬೆಂಗಳೂರು, ದಿನಾಂಕ:26-10-2021**

ಚಿಕ್ಕಮಗಳೂರು ನಗರದಲ್ಲಿರುವ ಬಸವನಹಳ್ಳಿ ಕೆರೆಯ ಹೂಳು ತೆಗೆಯುವ ಹಾಗೂ ಏರಿ ಅಭಿವೃದ್ಧಿ ಪಡಿಸುವ ರೂ.7.00 ಕೋಟಿ ಮೊತ್ತದ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ: ಆಇ 211 ಆಕೋ-1/2021, ದಿನಾಂಕ:08-10-2021 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

26/10/2021

**( ಮನೋಹರ ವೈ. ರೊಟ್ಟೆ )**
**ಸರ್ಕಾರದ ಅಧೀನ ಕಾರ್ಯದರ್ಶಿ (ತಾಂ-2)**
**ಜಲಸಂಪನ್ಮೂಲ ಇಲಾಖೆ**

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ (ಗ್ರೇಡ್-2), ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ (ಗ್ರೇಡ್-1), ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ವಿಶೇಷಾಧಿಕಾರಿ ಹಾಗೂ ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿ (ಕೃಭಾಜನಿ) ರವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು
9. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಗೊರೂರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

+++++